Akashvani : Bangalore
National Bulletin In Kannada
17.09.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಒಡಿಶಾದಲ್ಲಿ ಮಹಿಳಾ ಕೇಂದ್ರಿತ ಸುಭದ್ರಾ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
- ಇಂದಿನಿಂದ 'ಸ್ವಚ್ಛತಾ ಹೀ ಸೇವಾ' ಅಭಿಯಾನ; ವಿವಿಧ ಕಾರ್ಯಕ್ರಮಗಳ ಆಯೋಜನೆ
- ದೆಹಲಿ ಮುಖ್ಯಮಂತ್ರಿ ಸ್ಥಾನಕ್ಕೆ ಅರವಿಂದ್ ಕೇಜ್ರಿವಾಲ್ ರಾಜೀನಾಮೆ
- ಏಷ್ಯನ್ ಚಾಂಪಿಯನ್ ಹಾಕಿ ಟ್ರೋಫಿ; ಫೈನಲ್ ಪಂದ್ಯದಲ್ಲಿ ಚೀನಾ ವಿರುದ್ಧ ಭಾರತಕ್ಕೆ ಭರ್ಜರಿ ಗೆಲುವು

<><*<><>*><>

ಒಡಿಶಾದ ಭುವನೇಶ್ವರ್‌ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿ, ಪಿಎಂ ಅವಾಸ್ ಯೋಜನೆಯ ಫಲಾನುಭವಿಗಳೊಂದಿಗೆ ಸಂವಾದ ನಡೆಸಿ, ಯೋಜನೆಯ ಕುರಿತು ವಿಚಾರ ವಿನಿಮಯ ಮಾಡಿದರು. ಇದಕ್ಕೂ ಮುನ್ನ ಫಲಾನುಭವಿಯೊಬ್ಬರ ಮನೆಗೆ ಭೇಟಿ ನೀಡಿದ ಪ್ರಧಾನಿ, ಕುಟುಂಬ ಸದಸ್ಯರ ಯೋಗಕ್ಷೇಮ ವಿಚಾರಿಸಿದರು. ಪ್ರಧಾನಿ ಅವರ ಹುಟ್ಟುಹಬ್ಬದ ಅಂಗವಾಗಿ ಫಲಾನುಭವಿಗಳು ಸಿದ್ಧಪಡಿಸಿದ್ದ ಸಿಹಿ ಸೇವಿಸಿದರು. ಈ ಸಂದರ್ಭದಲ್ಲಿ ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಉಪಸ್ಥಿತರಿದ್ದರು. ನಂತರ, ಭುವನೇಶ್ವರದಲ್ಲಿ ಒಡಿಶಾ ಸರ್ಕಾರದ ಪ್ರಮುಖ ಸುಭದ್ರಾ ಯೋಜನೆಗೆ ಚಾಲನೆ ನೀಡಿದರು. ಸುಭದ್ರಾ ಯೋಜನೆ ರಾಜ್ಯದಲ್ಲಿ ಅತಿ ದೊಡ್ಡ ಮಹಿಳಾ ಕೇಂದ್ರಿತ ಉಪಕ್ರಮವಾಗಿದ್ದು, ೧ ಕೋಟಿಗೂ ಹೆಚ್ಚು ಮಹಿಳೆಯರಿಗೆ ಸೌಲಭ್ಯ ಒದಗಿಸುವ ಹಾಗೂ ವಿಶೇಷ ಬೆಂಬಲ ನೀಡುವ ಗುರಿ ಹೊಂದಿದೆ. ೨೧ ರಿಂದ ೬೦ ವರ್ಷದೊಳಗಿನ ಅರ್ಹ ಫಲಾನುಭವಿಗಳು ಐದು ವರ್ಷಗಳ ಅವಧಿಯಲ್ಲಿ ೫೦ ಸಾವಿರ ರೂಪಾಯಿಗಳನ್ನು ಪಡೆಯಲಿದ್ದಾರೆ. ಫಲಾನುಭವಿಗಳಿಗೆ ವಾರ್ಷಿಕವಾಗಿ ೧೦ ಸಾವಿರ ರೂಪಾಯಿಗಳನ್ನು ಎರಡು ಸಮಾನ ಕಂತುಗಳಲ್ಲಿ ಬ್ಯಾಂಕ್ ಖಾತೆಗಳ ಮೂಲಕ ಜಮೆ ಮಾಡಲಾಗುತ್ತದೆ. ಪ್ರಧಾನಿ ಅವರು, ೧೦ ಲಕ್ಷಕ್ಕೂ ಹೆಚ್ಚು ಮಹಿಳಾ ಫಲಾನುಭವಿಗಳಿಗೆ ಮೊದಲ ನಿಧಿ ವರ್ಗಾವಣೆ ಮಾಡಿದರು. ಇದೇ ವೇಳೆ, ೩ ಸಾವಿರದ ೮೦೦ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ರೈಲ್ವೆ ಯೋಜನೆಗಳಿಗೆ ಹಾಗೂ ೧ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಶಂಕುಸ್ಥಾಪನೆ ನೆರವೇರಿಸಿದರು.

<><*<><>*><>

ನವದೆಹಲಿಯ ಭಾರತ್ ಮಂಟಪದಲ್ಲಿ ಲನೇ ಭಾರತ ಜಲ ಸಪ್ತಾಹವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ನೀರಿನ ಸಂರಕ್ಷಣೆ, ಸುಧಾರಿತ ನಿರ್ವಹಣೆ, ಅಭಿವೃದ್ಧಿ ಮತ್ತು ವಿತರಣೆ ಗುರಿಗಳನ್ನು ಸಾಧಿಸಲು ಜನರ ಆಂದೋಲನ ಪ್ರಾರಂಭಿಸುವ ಅಗತ್ಯವನ್ನು ಒತ್ತಿ ಹೇಳಿದರು. ಜಲಸಂಪನ್ಮೂಲಗಳ ನಿರ್ವಹಣೆಗೆ ಸಂಬಂಧಿಸಿದಂತೆ ದೇಶದಲ್ಲಿ ಅನೇಕ ಪುರಾತನ ಪದ್ಧತಿಗಳಿವೆ ಮತ್ತು ಅವುಗಳು ಈಗಲು ಪ್ರಸ್ತುತವಾಗಿವೆ. ಅವುಗಳನ್ನು ಆಧುನಿಕ ರೂಪದಲ್ಲಿ ಅನ್ವಯಿಸಬೇಕು ಎಂದು ರಾಷ್ಟ್ರಪತಿ ಹೇಳಿದರು. ಆಜಾದಿ ಕಾ ಅಮೃತ ಮಹೋತ್ಸವದಲ್ಲಿ ಅಮೃತ ಸರೋವರಗಳನ್ನು ನಿರ್ಮಿಸಿ, ಅನೇಕ ಜಲಮೂಲಗಳನ್ನು ಪುನರುಜ್ಜೀವನಗೊಳಿಸಲಾಯಿತು. ಸಾವಿರಾರು ವರ್ಷಗಳ ಹಿಂದೆಯೇ, ಭಾರತೀಯ ಪುರಾತನ ಗ್ರಂಥಗಳು ನೀರಿನ ಸಂರಕ್ಷಣೆಯ ಬಗ್ಗೆ ಉಲ್ಲೇಖಿಸಿವೆ ಎಂದರು. ನಾಲ್ಕು ದಿನಗಳ ಕಾರ್ಯಕ್ರಮದಲ್ಲಿ, ೪೦ ದೇಶಗಳ ಇನ್ನೂರು ವಿದೇಶಿ ಪ್ರತಿನಿಧಿಗಳು ಸೇರಿದಂತೆ ಸುಮಾರು ನಾಲ್ಕು ಸಾವಿರ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

<><*<><>*><>

ದೇಶದ ನಾಗರಿಕರಲ್ಲಿ ಸ್ವಚ್ಛತೆಯ ಅರಿವು ಮೂಡಿಸಲು 'ಸ್ವಚ್ಛತಾ ಹಿ ಸೇವಾ' ಎಂಬ ಪಾಕ್ಷಿಕ ಅಭಿಯಾನಕ್ಕೆ ಇಂದು ಚಾಲನೆ ದೊರೆತಿದೆ. ಅಕ್ಟೋಬರ್ ೨ ರವರೆಗೆ ಈ ಅಭಿಯಾನ ಮುಂದುವರಿಯಲಿದೆ. ಸ್ವಚ್ಛ ಭಾರತ ಅಡಿಯಲ್ಲಿ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸ್ವಭಾವ ಸ್ವಚ್ಛತಾ-ಸಂಸ್ಕಾರ ಸ್ವಚ್ಛತಾ' ಈ ವರ್ಷದ ಧ್ಯೇಯವಾಗಿದೆ. ಅಭಿಯಾನವು ಪ್ರವಾಸಿ ಸ್ಥಳಗಳು, ಸಾರ್ವಜನಿಕ ಕಟ್ಟಡಗಳು, ವಾಣಿಜ್ಯ ಪ್ರದೇಶಗಳು, ಜಲಮೂಲಗಳು, ಪ್ರಾಣಿ ಸಂಗ್ರಹಾಲಯಗಳು, ಅಭಯಾರಣ್ಯಗಳು ಮತ್ತು ಸಮುದಾಯ ಹಾಗೂ ಸಾರ್ವಜನಿಕ ಶೌಚಾಲಯಗಳಂತಹ ವಿವಿಧ ತಾಣಗಳಲ್ಲಿ ಶ್ರಮದಾನ ಮತ್ತು ಸಾಮೂಹಿಕ ಕ್ರಿಯೆಯ ಮೂಲಕ ಬೃಹತ್ ಸ್ವಚ್ಛತಾ ಕಾರ್ಯಕ್ರಮಗಳನ್ನು ಒಳಗೊಂಡಿದೆ. ಅಭಿಯಾನದ ಅಂಗವಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಎಲ್ಲಾ ಸಚಿವಾಲಯಗಳು ದೇಶಾದ್ಯಂತ ವಿವಿಧ ಚಟುವಟಿಕೆಗಳನ್ನು ಆಯೋಜಿಸಿವೆ. ಈ ವರ್ಷದ ಅಭಿಯಾನವು, ಸ್ವಚ್ಛತೆಯ ಘಟಕಗಳು, ಶ್ರಮದಾನ ಚಟುವಟಿಕೆಗಳು, ಸ್ವಚ್ಛತೆಯಲ್ಲಿ ಜನರ ಭಾಗವಹಿಸುವಿಕೆ ಮತ್ತು ಸಫಾಯಿಮಿತ್ರ ಸುರಕ್ಷಾ ಶಿಬಿರ ಒಳಗೊಂಡಿದೆ. ೧೫ ದಿನಗಳ ಈ ಅಭಿಯಾನದ ಮೊದಲ ದಿನದಂದು, ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಪ್ರಧಾನಮಂತ್ರಿ ಭಾರತೀಯ ಜನೌಷಧ ಕೇಂದ್ರಗಳನ್ನು ಉದ್ಘಾಟಿಸಲಾಯಿತು. ಈ ಅಭಿಯಾನ, ನಾಗರಿಕರಿಗೆ ಕೈಗೆಟುಕುವ ಮತ್ತು ಗುಣಮಟ್ಟದ ಜೆನೆರಿಕ್ ಔಷಧಗಳನ್ನು ಒದಗಿಸುವ ಗುರಿ ಹೊಂದಿದೆ. ಸ್ವಚ್ಛತೆ ಎಂಬುದು ಈಗ

ಜನರ ಆಂದೋಲನವಾಗಿ ಮಾರ್ಪಟ್ಟಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಸ್ವಚ್ಛತಾ ಹಿ ಸೇವಾ ಅಭಿಯಾನದ ಅಂಗವಾಗಿ ನವದೆಹಲಿಯಲ್ಲಿಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸ್ವಚ್ಛತಾ ಪ್ರತಿಜ್ಞೆ ಬೋಧಿಸಿದ ನಂತರ ಅವರು ಮಾತನಾಡಿದರು.

<><*<><>*><>

ವಿವಿಧ ರಸ್ತೆಗಳು ಮತ್ತು ಹೆದ್ದಾರಿಗಳ ಯೋಜನೆಗಳ ನಿರ್ಮಾಣದಿಂದ ಹೊರಹೊಮ್ಮುವ ಮಾಲಿನ್ಯಕಾರಕ ಅಂಶಗಳಿಂದ ಪರಿಸರ ಸಂರಕ್ಷಣೆಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಉತ್ತರಪ್ರದೇಶದ ಗಾಜಿಯಾಬಾದ್‌ನಲ್ಲಿಂದು ಸ್ವಚ್ಛತಾ ಹೀ ಸೇವಾ ಅಭಿಯಾನ ಉದ್ದೇಶಿಸಿ ಮಾತನಾಡಿದ ಅವರು, ಪ್ರಯಾಣಿಕರು ಮತ್ತು ಆಟೋಮೊಬೈಲ್ ಕಂಪನಿಗಳು ಸುಸ್ಥಿರ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವಂತೆ ಮತ್ತು ಪರ್ಯಾಯ, ಹಸಿರು ಇಂಧನಗಳಾದ ಸಿಎನ್‌ಜಿ, ಹಸಿರು ಹೈಡ್ರೋಜನ್ ಮತ್ತು ಜೈವಿಕ ಎಥೆನಾಲ್ ಬಳಸಬೇಕೆಂದು ಕರೆ ನೀಡಿದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮೂರನೇ ಬಾರಿ ಅಧಿಕಾರಕ್ಕೆ ಬಂದು ಇಂದಿಗೆ ನೂರು ದಿನವಾಗಿದೆ. ವಿಕಸಿತ ಭಾರತ ಯೋಜನೆಯಡಿ ಪ್ರಧಾನಿ ಮೋದಿ, ನೂರು ದಿನಗಳಲ್ಲಿ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ರೈತರ ಅಭಿವೃದ್ಧಿ, ಮಹಿಳೆಯರ ಕಲ್ಯಾಣ, ಯುವಶಕ್ತಿ, ಸಾಮಾಜಿಕ ಕಲ್ಯಾಣ, ಆರೋಗ್ಯ ಮತ್ತು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ. ೧೦೦ ದಿನದಲ್ಲಿ ಪಿಎಂ ಕಿಸಾನ್ ನಿಧಿ ಯೋಜನೆಯಡಿ ೯ ಕೋಟಿ ೩ ಲಕ್ಷ ರೈತರ ಖಾತೆಗೆ ೨೦ ಸಾವಿರ ಕೋಟಿ ರೂಪಾಯಿ ಹಣ ವರ್ಗಾವಣೆಯಾಗಿದೆ. ಪ್ರಯೋಗಾಲಯ ಮತ್ತು ಭೂಮಿ ನಡುವಿನ ಅಂತರ ತಗ್ಗಿಸಲು ೧೦೯ ಹವಾಮಾನ ಸ್ಥಿತಿಸ್ಥಾಪಕ ಮತ್ತು ಉನ್ನತ ಗುಣಮಟ್ಟದ ಹೆಚ್ಚಿನ ಇಳುವರಿಯ ಬೆಳೆಗಳನ್ನು ಬಿಡುಗಡೆ ಮಾಡಲಾಗಿದೆ. ರೈತರ ಜೀವನಮಟ್ಟ ಸುಧಾರಿಸಲು ೭ ಯೋಜನೆಗಳ ಮೂಲಕ ೧೪ ಸಾವಿರದ ೨೦೦ ಕೋಟಿ ರೂಪಾಯಿ ಅನುದಾನ ಹಂಚಿಕೆ ಮಾಡಲಾಗಿದೆ. ನಾರಿ ಶಕ್ತಿಯ ಸಬಲೀಕರಣಕ್ಕೆ ಈ ಬಾರಿಯ ಬಜೆಟ್ ನಲ್ಲಿ ೩ ಲಕ್ಷ ಕೋಟಿ ರೂಪಾಯಿ ಮೀಸಲಿಡಲಾಗಿದೆ. ಮುದ್ರಾ ಯೋಜನೆಯಡಿ ಸಾಲ ನೀಡುವ ಮಿತಿಯನ್ನು ೧೦ ಲಕ್ಷ ರೂಪಾಯಿಯಿಂದ ೨೦ ಲಕ್ಷ ರೂಪಾಯಿಗೆ ಹೆಚ್ಚಿಸಲಾಗಿದೆ. ಯುವಜನರ ಕೌಶಲ್ಯಾಭಿವೃದ್ಧಿಗಾಗಿ ೪.೧ ಕೋಟಿ ಯುವಕರಿಗಾಗಿ ೨ ಲಕ್ಷ ಕೋಟಿ ರೂಪಾಯಿಗಳ ಪ್ರಧಾನಮಂತ್ರಿಗಳ ಪ್ಯಾಕೇಜ್ ಘೋಷಿಸಲಾಗಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ೧೦೦ ದಿನ ಪೂರೈಸಿದೆ. ಈ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ೧೦೦ ದಿನಗಳ ಆಡಳಿತವಧಿಯ ಸಾಧನೆಗಳ ಪುಸ್ತಕವನ್ನು ಲೋಕಾರ್ಪಣೆ ಮಾಡಿದರು. ಬಳಿಕ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ೧೦೦ ದಿನಗಳ ಅವಧಿಯಲ್ಲಿ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಕಳೆದ ೧೦ ವರ್ಷಗಳಲ್ಲಿ ಭಾರತವನ್ನು ಸದೃಢಗೊಳಿಸುವಲ್ಲಿ ಶ್ರಮಿಸಲಾಗಿದ್ದು, ಮೈತ್ರಿಕೂಟ ಪಕ್ಷಗಳೊಂದಿಗೆ ಸೇರಿ ಅದನ್ನೇ ಮುಂದುವರಿಸಲಾಗುತ್ತಿದೆ. ಮೂರನೇ ಅವಧಿಯಲ್ಲಿ ಬಿಜೆಪಿ ಮತ್ತು ಮಿತ್ರ ಪಕ್ಷಗಳ ಸಹಕಾರದಿಂದ ಜನಪರ ಯೋಜನೆಗಳನ್ನು ನೀಡಲಾಗುತ್ತಿದೆ. ದೇಶದ ಬಾಹ್ಯ ಮತ್ತು ಅಂತರಿಕ್ಷ ಸುರಕ್ಷತೆಗೆ ಆದ್ಯತೆ ನೀಡಲಾಗಿದೆ. ಶಿಕ್ಷಣ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆ ಮಾಡಲಾಗಿದೆ ಎಂದು ಹೇಳಿದರು. ಭಾರತದ ಡಿಜಿಟಲ್ ಇಂಡಿಯಾ ಯೋಜನೆಗಳನ್ನು ಹಲವು ದೇಶಗಳು ಅನುಸರಿಸಲು ಬಯಸಿವೆ ಮತ್ತು ಅನುಕರಿಸುತ್ತಿವೆ. ಅಂತರಿಕ್ಷ ಕ್ಷೇತ್ರದಲ್ಲಿ ಭಾರತವು ಜಾಗತಿಕವಾಗಿ ಮುನ್ನಡೆ ಸಾಧಿಸುತ್ತಿದೆ. ಅಲ್ಲದೇ, ಬಡತನ ನಿರ್ಮೂಲನಕ್ಕೆ ಹಲವು ಕ್ರಮಗಳನ್ನು ಜಾರಿ ಮಾಡಲಾಗಿದೆ. ಬಡವರಿಗೆ ಮೂಲ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ. ರೈತರ ಜೀವನ ಮಟ್ಟ ಸುಧಾರಣೆಗೆ ಯೋಜನೆಗಳನ್ನು ರೂಪಿಸಲಾಗಿದೆ ಎಂದು ಅಮಿತ್ ಶಾ ತಿಳಿಸಿದರು.

<><*<><>*><>

ದೆಹಲಿ ಮುಖ್ಯಮಂತ್ರಿ ಸ್ಥಾನಕ್ಕೆ ಅರವಿಂದ್ ಕೇಜ್ರಿವಾಲ್ ರಾಜೀನಾಮೆ ಸಲ್ಲಿಸಿದ್ದಾರೆ. ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿ.ಕೆ.ಸಕ್ಸೇನಾ ಅವರಿಗೆ ಅರವಿಂದ್ ಕೇಜ್ರಿವಾಲ್ ರಾಜೀನಾಮೆ ಸಲ್ಲಿಸಿದರು. ಆಮ್ ಆದ್ಮಿ ಪಕ್ಷದ ನಾಯಕಿ ಅತಿಶಿ ದೆಹಲಿಯ ನೂತನ ಮುಖ್ಯಮಂತ್ರಿಯಾಗಲಿದ್ದಾರೆ. ನವದೆಹಲಿಯಲ್ಲಿ ನಡೆದ ಆಪ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಅತಿಶಿ ಅವರನ್ನು ನಾಯಕಿಯನ್ನಾಗಿ ಆಯ್ಕೆ ಮಾಡಲಾಗಿದೆ. ಕೇಜ್ರಿವಾಲ್ ಜೈಲಿನಲ್ಲಿದ್ದಾಗ ಅತಿಶಿ ದೆಹಲಿಯಲ್ಲಿ ಆಡಳಿತ ನಡೆಸಿದ್ದರು.

<><*<><>*><>

ಎಲ್ಲ ಭಾಷೆಗಳನ್ನು ಗೌರವಿಸುವುದರ ಜೊತೆಗೆ ಹಿಂದಿಯನ್ನು ಉತ್ತೇಜಿಸಬೇಕು ಎಂದು ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್ ಹೇಳಿದ್ದಾರೆ. ನವದೆಹಲಿಯ ಪ್ರಸಾರ ಭಾರತಿ ಕಾರ್ಯಾಲಯದಲ್ಲಿಂದು ಹಿಂದಿ ದಿವಸ್ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಹಿಂದಿ ಭಾಷೆ ಮಾತನಾಡಲು ಮತ್ತು ಅರ್ಥ ಮಾಡಿಕೊಳ್ಳಲು ಸುಲಭವಾಗಿದೆ. ಪ್ರತಿಯೊಬ್ಬರು

ಹೆಮ್ಮೆಯಿಂದ ಹಿಂದಿ ಮಾತನಾಡಬೇಕು. ಪ್ರಪಂಚದಾದ್ಯಂತ ದೊಡ್ಡ ವೇದಿಕೆಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಹಿಂದಿಯಲ್ಲಿ ಭಾಷಣ ಮಾಡುತ್ತಾರೆ ಎಂದರು. ಪ್ರಸಾರ ಭಾರತಿ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ಗೌರವ್ ದ್ವಿವೇದಿ ಮಾತನಾಡಿ, ಭಾರತೀಯ ಭಾಷೆಗಳಲ್ಲಿ ಹಿಂದಿಗೆ ವಿಶಿಷ್ಟ ಸ್ಥಾನವಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಆಕಾಶವಾಣಿ ಮಹಾನಿರ್ದೇಶಕಿ ಪ್ರಜ್ಞಾ ಪಲಿವಾಲ್ ಗೌರ್, ದೂರದರ್ಶನ ಮಹಾ ನಿರ್ದೇಶಕ ಕಾಂಚನ್ ಪ್ರಸಾದ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಸತತ ಐದನೇ ಬಾರಿಗೆ ಏಷ್ಯನ್ ಚಾಂಪಿಯನ್ ಹಾಕಿ ಟ್ರೋಫಿಯನ್ನು ಭಾರತ ತನ್ನ ಮುಡಿಗೇರಿಸಿಕೊಂಡಿದೆ. ಚೀನಾದ ಹುಲುನ್‌ಬುಯರ್‌ನಲ್ಲಿ ಇಂದು ನಡೆದ ಫೈನಲ್ ಪಂದ್ಯದಲ್ಲಿ ಚೀನಾ ವಿರುದ್ಧ ೧-೦ ಗೋಲುಗಳ ಅಂತರದಿಂದ ಭಾರತ ಭರ್ಜರಿ ಜಯಗಳಿಸಿದೆ. ಕಠಿಣ ಸೆಣಸಾಟದ ಪಂದ್ಯದ ೫೧ನೇ ನಿಮಿಷದಲ್ಲಿ ಭಾರತದ ಪರ ಜುಗ್‌ರಾಜ್ ಸಿಂಗ್ ಗೋಲು ಗಳಿಸುವ ಮೂಲಕ ಭಾರತಕ್ಕೆ ಗೆಲುವು ತಂದುಕೊಟ್ಟರು.

<><*<><>*><>

ಮಧ್ಯ ಮತ್ತು ಪೂರ್ವ ಯೂರೋಪ್‌ನಲ್ಲಿ ಬೋರಿಸ್ ಚಂಡಮಾರುತದಿಂದ ಉಂಟಾದ ಪ್ರವಾಹದಲ್ಲಿ ಕನಿಷ್ಠ ೧೮ ಮಂದಿ ಮೃತಪಟ್ಟಿದ್ದಾರೆ. ಪೋಲೆಂಡ್‌ನಲ್ಲಿ ಉಂಟಾದ ಪ್ರವಾಹ ಸಂಬಂಧಿತ ಘಟನೆಗಳಲ್ಲಿ ನಾಲ್ಕು ಮಂದಿ ಅಸುನೀಗಿದ್ದಾರೆ. ಹೆಚ್ಚು ವಿಪತ್ತು ನಿರ್ವಹಣಾ ಪಡೆಯ ಐದು ಸಾವಿರಕ್ಕೂ ಸಿಬ್ಬಂದಿಯನ್ನು ಪ್ರವಾಹ ಪೀಡಿತ ಸ್ಥಳಗಳಲ್ಲಿ ನಿಯೋಜಿಸಲಾಗಿದೆ. ರೊಮೆನಿಯಾದಲ್ಲಿ ಏಳು ಮಂದಿ ನಾಗರಿಕರು ಸಾವನಪ್ಪಿದ್ದಾರೆ. ಜೆಕ್ ಗಣರಾಜ್ಯದಲ್ಲಿ ಮೂವರು ಮೃತಪಟ್ಟಿದ್ದು, ೧೩ ಸಾವಿರಕ್ಕೂ ಹೆಚ್ಚು ನಾಗರಿಕರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೯೦ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೩ ಸಾವಿರದ ೭೯ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೩೪ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೨೫ ಸಾವಿರದ ೪೧೮ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೭೫ ಪೈಸೆಯಷ್ಟಾಗಿದೆ.

<><*<><>*><>

ದೆಹಲಿಯಲ್ಲಿ ಎರಡನೇ ಆವೃತ್ತಿಯ ನೌಕಾ ಕಮಾಂಡರ್‌ಗಳ ಸಮ್ಮೇಳನ ಇಂದಿನಿಂದ ಆರಂಭವಾಗಿದೆ. ಅತ್ಯುನ್ನತ ಮಟ್ಟದ ದ್ವೈವಾರ್ಷಿಕ ಸಮ್ಮೇಳನದಲ್ಲಿ ನೌಕಾ ಕಮಾಂಡರ್‌ಗಳ ನಡುವೆ ಮಹತ್ವದ ಕಾರ್ಯತಂತ್ರ, ಕಾರ್ಯಾಚರಣೆ ಮತ್ತು ಆಡಳಿತಾತ್ಮಕ ವಿಷಯಗಳ ಕುರಿತು ಚರ್ಚೆ ನಡೆಯಲಿದೆ. ನಾಲ್ಕು ದಿನಗಳ ಸಮ್ಮೇಳನ ನೌಕಾಪಡೆಯ ಮುಖ್ಯಸ್ಥರ ಉದ್ಘಾಟನಾ ಭಾಷಣದೊಂದಿಗೆ ಪ್ರಾರಂಭವಾಗಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಕಳೆದ ಆರು ತಿಂಗಳಲ್ಲಿ ಭಾರತೀಯ ನೌಕಾಪಡೆ ಅನುಸರಿಸಿದ ಪ್ರಮುಖ ಕಾರ್ಯಾಚರಣೆ, ತರಬೇತಿ ಮತ್ತು ಆಡಳಿತಾತ್ಮಕ ಚಟುವಟಿಕೆಗಳನ್ನು ಪರಿಶೀಲಿಸಲಿದ್ದು, ಕಡಲ ಹಿತಾಸಕ್ತಿಯ ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸಲಿದ್ದಾರೆ. ಭೌಗೋಳಿಕ-ರಾಜಕೀಯ ಮತ್ತು ಭೌಗೋಳಿಕ ಕಾರ್ಯತಂತ್ರದ ಪ್ರಾದೇಶಿಕ ಸವಾಲುಗಳು ಮತ್ತು ಪಶ್ಚಿಮ ಏಷ್ಯಾದ ಕಡಲ ಭದ್ರತಾ ಪರಿಸ್ಥಿತಿಗಳಲ್ಲಿನ ಸಂಕೀರ್ಣತೆಯ ಹಿನ್ನೆಲೆಯಲ್ಲಿ ಈ ಸಮ್ಮೇಳನ ಭಾರತೀಯ ನೌಕಾಪಡೆಯ ಭವಿಷ್ಯದ ಹಾದಿಯನ್ನು ರೂಪಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*<><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*<><>